# ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ

೯ನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕ ಗೋಪುರ, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು-01.

**ದಿನಾಂಕ:05.03.2015ರಂದು ಮಧ್ಯಾಹ್ನ 1.00 ಗಂಟೆಗೆ ನಿಗಮದ ಕೇಂದ್ರ ಕಚೇರಿಯಲ್ಲಿರುವ ಮಾನ್ಯ ಅಧ್ಯಕ್ಷರ ಕೊಠಡಿಯಲ್ಲಿ ನಡೆದ ನಿಗಮದ 205ನೇ ನಿರ್ದೇಶಕರ ಮಂಡಳ ಸಭೆಯ ನಡವಳಿಗಳು:**

**ಹಾಜರಾತಿ:**

| ಹೆಸರು ಮತ್ತು ಪದನಾಮ | |
|---|---|
| ಕುಮಾರಿ ಮಲ್ಲಾಜಮ್ಮ,<br>ಮಾನ್ಯ ಅಧ್ಯಕ್ಷರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ | ಅಧ್ಯಕ್ಷರು |
| ಶ್ರೀ ಎನ್. ಮಂಜುನಾಥ ಪ್ರಸಾದ್, ಭಾ.ಆ.ಸೇ.,<br>ಸರ್ಕಾರದ ಕಾರ್ಯದರ್ಶಿಗಳು,<br>ಸಮಾಜ ಕಲ್ಯಾಣ ಇಲಾಖೆ,<br>ಕರ್ನಾಟಕ ಸರ್ಕಾರ | ಸದಸ್ಯರು |
| ಶ್ರೀಮತಿ ಎಂ.ವಿ. ಸಾವಿತ್ರಿ, ಭಾ.ಆ.ಸೇ.,<br>ಆಯುಕ್ತರು,<br>ಸಮಾಜ ಕಲ್ಯಾಣ ಇಲಾಖೆ, | ಸದಸ್ಯರು |
| ಶ್ರೀ ಹೀರಾನಾಯಕ್, ಕ.ಆ.ಸೇ., (ಎಸ್‌ಟಿಎಸ್)<br>ವ್ಯವಸ್ಥಾಪಕ ನಿರ್ದೇಶಕರು,<br>ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ | ಸದಸ್ಯರು |
| ಶ್ರೀ.ಕೆ.ಸಿ.ಶ್ರೀರಾಮಯ್ಯ, ಕ.ಆ.ಸೇ., (ಎಸ್‌ಟಿಎಸ್)<br>ವ್ಯವಸ್ಥಾಪಕ ನಿರ್ದೇಶಕರು<br>ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ | ಸದಸ್ಯ ಕಾರ್ಯದರ್ಶಿ |
| ಶ್ರೀ ರಾಮಚಂದ್ರಯ್ಯ,<br>ಸರ್ಕಾರದ ಉಪ ಕಾರ್ಯದರ್ಶಿಗಳು (ಕಲ್ಯಾಣ)<br>ಆರ್ಥಿಕ ಇಲಾಖೆ | ಸದಸ್ಯರು |

**ಗೈರು ಹಾಜರಿ:**

| | |
|---|---|
| ಶ್ರೀಮತಿ ಎಲ್. ರಾಜೇಶ್ವರಿ<br>ಉಪ ಕಾರ್ಯದರ್ಶಿಗಳು,<br>ಸಾರ್ವಜನಿಕ ಉದ್ದಿಮೆಗಳ ಇಲಾಖೆ | ಸದಸ್ಯರು |
| ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕರು<br>ರಾಷ್ಟ್ರೀಯ ಪರಿಶಿಷ್ಟ ಜಾತಿ ಹಣಕಾಸು ಮತ್ತು ಅಭಿವೃದ್ಧಿ ನಿಗಮ, ಭಾರತ ಸರ್ಕಾರ, ನವದೆಹಲಿ | ಸದಸ್ಯರು |
| ನಿರ್ದೇಶಕರು,<br>ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ,<br>ಭಾರತ ಸರ್ಕಾರ, ನವದೆಹಲಿ | ಸದಸ್ಯರು |

ವ್ಯವಸ್ಥಾಪಕ ನಿರ್ದೇಶಕರು ನಿಗಮದ ಮಾನ್ಯ ಅಧ್ಯಕ್ಷರನ್ನು ಹಾಗೂ ಸಭೆಯಲ್ಲಿ ಹಾಜರಿದ್ದ ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಮತ್ತು ಹಾಜರಿದ್ದ ನಿರ್ದೇಶಕರ ಮಂಡಳಿಯ ಇತರೆ ಸದಸ್ಯರನ್ನು ಸ್ವಾಗತಿಸಿದರು. ಶ್ರೀ ಎಸ್.ಎನ್. ಜಯರಾಂ, ಭಾ.ಆ.ಸೇ., ಇವರ ಸ್ಥಾನಕ್ಕೆ ಶ್ರೀಮತಿ ಎಂ.ವಿ. ಸಾವಿತ್ರಿ, ಭಾ.ಆ.ಸೇ., ರವರನ್ನು ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರನ್ನಾಗಿ ನೇಮಿಸಿರುವುದನ್ನು ಸಭೆಯ ಗಮನಕ್ಕೆ ತರುತ್ತಾ, ಶ್ರೀ ಎನ್.ಎನ್. ಜಯರಾಂ, ಭಾ.ಆ.ಸೇ., ರವರು ನಿಗಮದ ನಿರ್ದೇಶಕರ ಮಂಡಳಿ ಸದಸ್ಯರಾಗಿ ಸಲ್ಲಿಸಿದ ಸೇವೆಗೆ ಕೃತಜ್ಞತೆಯನ್ನು ಸಲ್ಲಿಸಿದರು. ಸಭೆಗೆ ಕೋರಂ ಇರುವುದನ್ನು ಖಾತರಿಪಡಿಸಿಕೊಂಡ ನಂತರ ಸಭೆ ನಡೆಸಬಹುದೆಂದು ಮಾನ್ಯ ಅಧ್ಯಕ್ಷರ ಗಮನಕ್ಕೆ ತರಲಾಯಿತು. 205ನೇ ಆಡಳಿತ ಮಂಡಳಿಯ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಲು ವ್ಯವಸ್ಥಾಪಕ ನಿರ್ದೇಶಕರು ನಿಗಮದ ಮಾನ್ಯ ಅಧ್ಯಕ್ಷರನ್ನು ಕೋರಿದರು. 205ನೇ ಆಡಳಿತ ಮಂಡಳಿ ಸಭೆಯ ವಿಷಯವಾರು ನಡವಳಿ ಈ ಕೆಳಗಿನಂತಿದೆ.

**ವಿಷಯ ಸಂಖ್ಯೆ: 01: 204ನೇ ನಿರ್ದೇಶಕರ ಮಂಡಳಿ ಸಭೆಯ ನಡವಳಿ ಅಂಗೀಕರಿಸುವ ಕುರಿತು.**

* * * * *

ದಿನಾಂಕ:12.01.2015 ರಂದು ನಡೆದ 204ನೇ ನಿರ್ದೇಶಕರ ಮಂಡಳಿಯ ಸಭೆಯಲ್ಲಿ ತೆಗೆದುಕೊಂಡ ವಿಷಯವಾರು ತೀರ್ಮಾನಗಳ ನಡವಳಿಯನ್ನು ಸರ್ವ ಸದಸ್ಯರಿಗೂ ಕಳುಹಿಸಲಾಗಿತ್ತು. ಯಾವುದೇ ಸದಸ್ಯರುಗಳಿಂದ ಸದರಿ ನಡವಳಿಯ ಬಗ್ಗೆ ವ್ಯತಿರಿಕ್ತ ಅಭಿಪ್ರಾಯಗಳು ಬಂದಿರುವುದಿಲ್ಲವೆಂಬುದನ್ನು ಸಭೆಯ ಗಮನಕ್ಕೆ ತರಲಾಯಿತು ಮತ್ತು ನಡವಳಿಯನ್ನು ಯಥವತ್ತಾಗಿ ಅಂಗೀಕರಿಸುವ ಬಗ್ಗೆ ಸಭೆಯನ್ನು ಕೋರಲಾಯಿತು.

**ನಿರ್ಣಯ: ಸದಸ್ಯರಿಂದ ವ್ಯತಿರಿಕ್ತ ಅಭಿಪ್ರಾಯಗಳು ಬಾರದ ಕಾರಣ, ನಡವಳಿಯನ್ನು ಯಥಾವತ್ತಾಗಿ ಅಂಗೀಕರಿಸಿ ಸ್ಥಿರೀಕರಿಸಲು ಸಭೆಯು ನಿರ್ಣಯಿಸಿತು.**

**ವಿಷಯ ಸಂಖ್ಯೆ:2: ನಿಗಮದ 204ನೇ ನಿರ್ದೇಶಕರ ಮಂಡಳಿ ಸಭೆಯ ನಡವಳಿಗಳ ಮೇಲೆ ತೆಗೆದುಕೊಂಡ ಕ್ರಮಗಳ ಬಗ್ಗೆ ಅನುಪಾಲನಾ ವರದಿ**

ಕ್ರಮ ಸಂಖ್ಯೆ 2ರ ವಿಷಯ ಸಂಖ್ಯೆ 5ಕ್ಕೆ ಸಂಬಂಧಪಟ್ಟಂತೆ ಜಿಲ್ಲಾ ವ್ಯವಸ್ಥಾಪಕರಿಂದ ವರದಿಯನ್ನು ಪಡೆದು ಮುಂದಿನ ನಿರ್ದೇಶಕರ ಮಂಡಳಿ ಸಭೆಗೆ ಮಂಡಿಸಲು ತೀರ್ಮಾನಿಸಲಾಯಿತು.

ಕ್ರಮ ಸಂಖ್ಯೆ 10ರ ವಿಷಯ ಸಂಖ್ಯೆ 13ಕ್ಕೆ ಸಂಬಂಧಿಸಿದಂತೆ ಕಾರ್ಯಪಾಲಕ ಅಭಿಯಂತರರು ತಕ್ಷಣ ಕ್ರಮವಹಿಸಿ ತೆಗೆದುಕೊಂಡ ಕ್ರಮದ ಬಗ್ಗೆ ಬೆಳಗಾವಿ ಜಿಲ್ಲಾ ವ್ಯವಸ್ಥಾಪಕರಿಂದ ವರದಿಯನ್ನು ಪಡೆದು ಮುಂದಿನ ನಿರ್ದೇಶಕರ ಮಂಡಳಿ ಸಭೆಗೆ ಮಂಡಿಸಲು ತೀರ್ಮಾನಿಸಲಾಯಿತು.

ಕ್ರಮ ಸಂಖ್ಯೆ 14ರ ವಿಷಯ ಸಂಖ್ಯೆ 17ಕ್ಕೆ ಸಂಬಂಧಪಟ್ಟಂತೆ ಅರ್ಹತೆಯುಳ್ಳ ನೌಕರರಿಗೆ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012ರನ್ವಯ ಪರಿಷ್ಕೃತ ವೇತನ ಮತ್ತು ಇತರೆ ಆರ್ಥಿಕ ಸೌಲಭ್ಯಗಳನ್ನು ಮಂಜೂರಿ ಮಾಡುವ ಸಂಬಂಧ ನಿಯಮಾನುಸಾರ ಪರಿಶೀಲಿಸಿ ಅನುಮೋದನೆಗೆ ಮುಂದಿನ ನಿರ್ದೇಶಕರ ಮಂಡಳಿ ಸಭೆ ಮುಂದೆ ಮಂಡಿಸಲು ತೀರ್ಮಾನಿಸಲಾಯಿತು.

ಕ್ರಮ ಸಂಖ್ಯೆ 18ರ ವಿಷಯ ಸಂಖ್ಯೆ 21ರ ಬಗ್ಗೆ ಚರ್ಚಿಸಿ, ಏತ ನೀರಾವರಿ ಯೋಜನೆಗಳಲ್ಲಿ ಕಡ್ಡಾಯವಾಗಿ ಸಂಬಂಧಿಸಿದ ಇಲಾಖೆ/ನಿಗಮದ ಕಾರ್ಯಪಾಲಕ ಅಭಿಯಂತರರಿಂದ ನೀರಿನ ಉಪಯೋಗದ ಬಗ್ಗೆ ದೃಢೀಕರಣ ಪತ್ರ, ಮಾನ್ಯ ಶಾಸಕರು ಫಲಾನುಭವಿಯನ್ನು ಆಯ್ಕೆ ಮಾಡಿರುವ ಬಗ್ಗೆ ಸಭಾ ನಡವಳಿಗಳು, ಕಂದಾಯ ನಕ್ಷೆ ಮತ್ತು

ವಿದ್ಯುತ್ ಸರಬರಾಜು ಕಂಪನಿಗಳಿಂದ ವಿದ್ಯುತ್ ಸರಬರಾಜು ಮಾಡುವ ಬಗ್ಗೆ ಒಪ್ಪಿಗೆ ಪತ್ರ ಇತ್ಯಾದಿಗಳನ್ನು ಕಡ್ಡಾಯವಾಗಿ ಪ್ರಸ್ತಾವನೆಯೊಂದಿಗೆ ಸಲ್ಲಿಸಲು ಸಂಬಂಧಿಸಿದ ಜಿಲ್ಲಾ ವ್ಯವಸ್ಥಾಪಕರುಗಳಿಗೆ ಸೂಚನೆಗಳನ್ನು ನೀಡಲು ಸಭೆಯು ತೀರ್ಮಾನಿಸಿತು.

**ವಿಷಯ ಸಂಖ್ಯೆ: 03 : ದಿನಾಂಕ:31.01.2015ರ ಅಂತ್ಯಕ್ಕೆ ನಿಗಮದ ವಿವಿಧ ಯೋಜನೆಗಳಡಿ ಸಾಧಿಸಿದ ಪ್ರಗತಿ ವರದಿಯ ಬಗ್ಗೆ ಪರಿಶೀಲನೆ**

ದಿನಾಂಕ:31-01-2015ರ ಅಂತ್ಯಕ್ಕೆ ನಿಗಮದಿಂದ ಅನುಷ್ಠಾನಗೊಳಸುತ್ತಿರುವ ವಿವಿಧ ಯೋಜನೆಗಳ 2014-15ನೇ ಸಾಲಿನ ಪ್ರಗತಿಯ ಬಗ್ಗೆ ಚರ್ಚಿಸಲಾಯಿತು. ಆರ್ಥಿಕ ಗುರಿ ಸಾಧನೆಯಲ್ಲಿ ಪ್ರಗತಿ ಕುಂಠಿತವಾಗಿರುವ ಬಗ್ಗೆ ಸರ್ಕಾರದ ಕಾರ್ಯದರ್ಶಿಗಳು ಪ್ರಸ್ತಾಪಿಸಿ ಭೌತಿಕ ಮತ್ತು ಆರ್ಥಿಕ ಗುರಿಯನ್ನು ಸಾಧಿಸಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲು ಸಲಹೆ ನೀಡಿದರು.

**ವಿಷಯ ಸಂಖ್ಯೆ: 04 : ಗಂಗಾ ಕಲ್ಯಾಣ ಯೋಜನೆಯಡಿ ಹುಕ್ಕೇರಿ ತಾಲ್ಲೂಕಿನಲ್ಲಿ ಕೊರೆದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ನೀಡಲು ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘ ನಿಯಮಿತಕ್ಕೆ ಹಣ ಬಿಡುಗಡೆ ಮಾಡುವ ಬಗ್ಗೆ**

ವ್ಯವಸ್ಥಾಪಕ ನಿರ್ದೇಶಕರು, ಹುಕ್ಕೇರಿ ವಿದ್ಯುತ್ ಕಂಪನಿಯು ವಿದ್ಯುದ್ದೀಕರಣಕ್ಕೆ ತಗಲಿರುವ ವೆಚ್ಚವನ್ನು ಮರುಪಾವತಿಸಲು ಕೋರಿರುವ ವಿಷಯವನ್ನು ಪ್ರಸ್ತಾಪಿಸಿ, ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರ ಸಂಘವು ನೀಡುವ ವಿದ್ಯುತ್ ಸಂಪರ್ಕಗಳು ಸೇರಿದಂತೆ ಹಣವನ್ನು ಹುಬ್ಬಳ್ಳಿ ಎಸ್ಕಾಂಗೆ ತುಂಬಿಸಲಾಗುತ್ತಿದೆ ಎಂದು ಆದರೆ ಹುಬ್ಬಳ್ಳಿ ಎಸ್ಕಾಂ ಸದರಿ ಸಂಘಕ್ಕೆ ಹಣವನ್ನು ನೀಡುತ್ತಿಲ್ಲವೆಂದು ತಿಳಿಸಿ, ಸದರಿ ಸಂಘವು ಪಾವತಿಸಲು ಕೋರಿರುವ ಮೊತ್ತವನ್ನು 3 ಹಂತಗಳಲ್ಲಿ ಪಾವತಿಸಲು ಅನುಮತಿ ಕೋರಿದರು.

ಈ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಸದರಿ ಸಂಘವು ವಿದ್ಯುತ್ ಸಂಪರ್ಕಗಳನ್ನು ಕಲ್ಪಿಸಿರುವ ಬಗ್ಗೆ ನಿಖರವಾಗಿ ಸಂಬಂಧಿಸಿದ ಜಿಲ್ಲಾ ವ್ಯವಸ್ಥಾಪಕರಿಂದ ವರದಿ ಪಡೆದುಕೊಂಡು ಹುಬ್ಬಳ್ಳಿ ಎಸ್ಕಾಂ ಸಂಸ್ಥೆಯು ಸದರಿ ಸಂಪರ್ಕಗಳಿಗೆ ಯಾವುದೇ ಹಣವನ್ನು ನೀಡಿರುವುದಿಲ್ಲವೆಂಬ ಬಗ್ಗೆ ಖಾತರಿಪಡಿಸಿಕೊಂಡು 3 ಹಂತಗಳಲ್ಲಿ ಸದರಿ ಸಂಘಕ್ಕೆ ನೀಡಬೇಕಾಗಿರುವ ಹಣವನ್ನು ಪಾವತಿಸಲು ಒಪ್ಪಿಗೆ ನೀಡಲು ಚರ್ಚಿಸಿತು.

**ನಿರ್ಣಯ: ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರ ಸಂಘವು ಗಂಗಾಕಲ್ಯಾಣ ಯೋಜನೆಯಡಿ ಕೊರೆದಿರುವ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕಗಳನ್ನು ಕಲ್ಪಿಸಿರುವ ಬಗ್ಗೆ ನಿಖರವಾದ ಮಾಹಿತಿಯನ್ನು ಸಂಬಂಧಿಸಿದ ಜಿಲ್ಲಾ ವ್ಯವಸ್ಥಾಪಕರಿಂದ ಪಡೆದುಕೊಂಡು, ಹುಬ್ಬಳ್ಳಿ ಎಸ್ಕಾಂ ಸಂಸ್ಥೆಯು ಸದರಿ ಸಂಪರ್ಕಗಳಿಗೆ ಯಾವುದೇ ಹಣವನ್ನು ನೀಡಿರುವುದಿಲ್ಲವೆಂಬ ಬಗ್ಗೆ ಖಾತರಿಪಡಿಸಿಕೊಂಡು 3 ಹಂತಗಳಲ್ಲಿ ಸದರಿ ಸಂಘಕ್ಕೆ ನೀಡಬೇಕಾಗಿರುವ ಹಣವನ್ನು ಪಾವತಿಸಲು ಒಪ್ಪಿಗೆ ನೀಡಿತು.**

**Sub. No. 05 Declaration as Non-Banking Financial Company not accepting deposits required as per guidelines made under the Reserve Bank of India Act, 1934.**

"**RESOLVED** to confirm that Dr. B.R. Ambedkar Development Corporation Limited has not been accepting any deposits from the public and that the Corporation shall not invite or accept any such deposits from the public during the year 2015-16 also."

**ವಿಷಯ ಸಂಖ್ಯೆ: 06 : ಭೂ ಒಡೆತನ ಯೋಜನೆಯಡಿ ಬೀದರ್ ತಾಲ್ಲೂಕಿನ ಅಲಿಯಂಬರ ಗ್ರಾಮದ ಘಟಕ ವೆಚ್ಚ ಪರಿಷ್ಕರಿಸುವ ಬಗ್ಗೆ.**

ಭೂ ಒಡೆತನ ಯೋಜನೆಯಡಿ ಬೀದರ್ ಜಿಲ್ಲೆಯ ಬೀದರ್ ತಾಲ್ಲೂಕಿನ ಅಲಿಯಂಬರ ಗ್ರಾಮದ ಸರ್ವೆ ನಂ.220,2017ರಲ್ಲಿ ಒಟ್ಟು 40.00ಎಕರೆ ಖುಷ್ಕಿ ಜಮೀನನ್ನು ಶ್ರೀ.ಬಸವಂತರಾಯ ಬಿನ್ ಗುರುಲಿಂಗಪ್ಪ, ಅಲಿಯಂಬರ ಗ್ರಾಮ ಇವರು ಮಾರಾಟ ಮಾಡಲು ಮುಂದೆ ಬಂದ ಕಾರಣ ಈ ಜಮೀನನ್ನು ಎಕರೆಯೊಂದಕ್ಕೆ ರೂ.81,500/-ದರದಂತೆ ನಿಗದಿಪಡಿಸಿ ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:19.10.2011ರಂದು ಜರುಗಿದ ಭೂ ಒಡೆತನ ಯೋಜನೆಯ ಜಿಲ್ಲಾ ಅನುಷ್ಟಾನ ಸಮಿತಿ ಸಭೆಯ ನಡವಳಿಯಲ್ಲಿ ತೀರ್ಮಾನಿಸಲಾಗಿತ್ತು. ಜಿಲ್ಲಾಧಿಕಾರಿಗಳ ಶಿಫಾರಸ್ಸಿನ ಅನ್ವಯ ನಿಗಮವು ದಿನಾಂಕ:28.03.2012ರಂದು ಈ ಭೂಮಿಯನ್ನು ಸದರಿ ದರದಲ್ಲಿ ಖರೀದಿಸಲು ಮಂಜೂರಾತಿ ನೀಡಿ, ದಿನಾಂಕ:31.03.2012ರಂದು ಬೀದರ್ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರಿಗೆ ಹಣ ಬಿಡುಗಡೆ ಮಾಡಲಾಗಿತ್ತೆಂದೂ, ಈ ಮಧ್ಯೆ ನೋಂದಣಿ ಮಾಡಿಸಲು ನಕಾಶೆ ಕೊಡುವುದು ತಡವಾದ ಕಾರಣ ಮತ್ತು ಭೂ ಮಾಲೀಕರಾದ ಶ್ರೀ. ಬಸವಂತರಾಯ ಬಿನ್ ಗುರುಲಿಂಗಪ್ಪ ಇವರು ದಿನಾಂಕ:23.09.2012ರಂದು ಮರಣ ಹೊಂದಿರುತ್ತಾರೆ. ಈ ಕಾರಣದಿಂದಾಗಿ ಸದರಿ ಜಮೀನನ್ನು ನೋಂದಣಿ ಮಾಡಿಸಲು ಸಾಧ್ಯವಾಗಿರುವುದಿಲ್ಲ. ಇದಾದ ನಂತರ ಭೂ ಮಾಲೀಕ ಬಸವಂತರಾಯರವರು ಪೌತಿಯಾದ ನಂತರ ಪೌತಿವಾರು ಖಾತೆಯನ್ನು ಅವರ ಮಗ ಶ್ರೀ.ಶಾಂತಕುಮಾರ್‌ರವರ ಹೆಸರಿಗೆ ಬದಲಾಯಿಸಿಕೊಂಡಿರುತ್ತಾರೆ ಮತ್ತು ಅಂದಿನ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ತನ್ನ ಜಮೀನಿಗೆ ಇತ್ತೀಚಿನ ಮಾರ್ಗಸೂಚಿ ಬೆಲೆಗಳನ್ವಯ ದರ ನಿಗದಿಪಡಿಸಿ ಜಮೀನು ಮಾರಾಟ ಮಾಡಲು ಅನುವು ಮಾಡಿಕೊಡಬೇಕೆಂದು ಕೋರಿಕೊಂಡಿದ್ದರು.

ಸದರಿ ಮನವಿಯನ್ನು ಪರಿಶೀಲಿಸಿದ ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು ಭೂ ಒಡೆತನ ಯೋಜನೆ ಭೂ ಖರೀದಿ ಸಮಿತಿ ಇವರು ಪ್ರತಿ ಎಕರೆ ಖುಷ್ಕಿ ಜಮೀನಿಗೆ ರೂ.81,500/-ಗಳ ಬದಲಾಗಿ 2012-13ನೇ ಸಾಲಿನ ಮಾರ್ಗಸೂಚಿ ಬೆಲೆಗಳ ಅನ್ವಯ ರೂ.2.50ಲಕ್ಷ ನಿಗದಿಪಡಿಸಿ ಉಳಿದಂತೆ ಈ ಹಿಂದೆ ದಿನಾಂಕ:19.10.2011ರಂದು ನಡೆದ ಸಮಿತಿ ಸಭೆಯಲ್ಲಿ ತೆಗೆದುಕೊಂಡಿರುವ ತೀರ್ಮಾನಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲವೆಂದು ತಿಳಿಸಿ ನಡವಳಿ ಮಾಡಿರುತ್ತಾರೆ.

ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ಇವರ ಅಧ್ಯಕ್ಷತೆಯಲ್ಲಿ ನಡೆದಿರುವ ಭೂ ಒಡೆತನ ಯೋಜನೆ ಸಮಿತಿ ಸಭೆಯಲ್ಲಿ ಎಕರೆಯೊಂದಕ್ಕೆ ನಿಗದಿಪಡಿಸಿರುವ ದರ ರೂ.2,50,000/-ಗಳಲ್ಲಿ ಈ ಜಮೀನುಗಳನ್ನು ಖರೀದಿಸುವುದು ಸೂಕ್ತವಾಗಿದೆಯೇ ಎಂಬುದನ್ನು ಪರಿಶೀಲಿಸಿ ಸೂಕ್ತ ಅಭಿಪ್ರಾಯ ಕೊಡಲು ಪ್ರಾದೇಶಿಕ ಆಯುಕ್ತರು, ಪ್ರಾಂತೀಯ ಕಛೇರಿ, ಕಂದಾಯ ಇಲಾಖೆ, ಗುಲ್ಬರ್ಗಾ ರವರನ್ನು ಕೋರಲಾಗಿತ್ತು.

ಪ್ರಾದೇಶಿಕ ಆಯುಕ್ತರು, ಗುಲ್ಬರ್ಗಾ ರವರು ಜಿಲ್ಲಾಧಿಕಾರಿಗಳು ಹಾಗೂ ಭೂ ಒಡೆತನ ಯೋಜನೆ ಅನುಷ್ಟಾನ ಸಮಿತಿ ಬೀದರ ಇವರು ಸಲ್ಲಿಸಿರುವ ವರದಿಯ ಆಧಾರದ ಮೇಲೆ ಬೀದರ ತಾಲ್ಲೂಕಿನ ಅಲಿಯಂಬರ ಗ್ರಾಮದ ಸರ್ವೆ ನಂ.220 ಮತ್ತು 217ರಲ್ಲಿನ ಒಟ್ಟು 41.31ಎಕರೆ ಜಮೀನು ಪೈಕಿ 40.00ಎಕರೆ ಖುಷ್ಕಿ ಜಮೀನನ್ನು ಎಕರೆ ಒಂದಕ್ಕೆ ರೂ.2.50ಲಕ್ಷ ಬೆಲೆ ನಿಗದಿಪಡಿಸುವುದು ಸೂಕ್ತವಾಗಿರುತ್ತದೆ ಎಂದು ಅಭಿಪ್ರಾಯ ನೀಡಿದ್ದು, ಬೀದರ ತಾಲ್ಲೂಕಿನ ಅಲಿಯಂಬರ ಗ್ರಾಮದ ಸರ್ವೆ